# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಮಲ್ಪೆ ಮೀನುಗಾರಿಕೆ ಬಂದರಿನಲ್ಲಿ ರೂ.5.00 ಕೋಟಿಗಳ ಅಂದಾಜು ವೆಚ್ಚದಲ್ಲಿ ಮೀನುಗಾರಿಕಾ ದೋಣಿಗಳ ಸುರಕ್ಷತೆಗಾಗಿ 75 ಮೀಟರ್ ಉದ್ದದ ಜೆಟ್ಟಿಯನ್ನು ವಿಸ್ತರಿಸುವ ಕುರಿತು.

ಓದಲಾಗಿದೆ:- ಪತ್ರ ಸಂಖ್ಯೆ: ಮೀನಿ/ಬಂದರು/241//2016, ದಿನಾಂಕ: 18-04-2017.

******

## ಪ್ರಸ್ತಾವನೆ:

ರಾಜ್ಯ ಸರ್ಕಾರವು 2017-18 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-62 ರಲ್ಲಿ "ಮಲ್ಪೆ ಮತ್ತು ಮಂಗಳೂರು ಮೀನುಗಾರಿಕೆ ಬಂದರುಗಳ ದೋಣಿಗಳ ಸಂಖ್ಯೆಯಲ್ಲಿ ಹೆಚ್ಚಳವಾಗಿರುವುದರಿಂದ ಅವುಗಳ ದಟ್ಟಣೆಯನ್ನು ನಿರ್ವಹಿಸಲು ಅಂದಾಜು 5 ಕೋಟಿ ರೂ.ಗಳ ವೆಚ್ಚದಲ್ಲಿ ದೋಣಿಗಳ ಸುರಕ್ಷಿತ ಇಳಿದಾಣಕ್ಕಾಗಿ 75 ಮೀ. ಉದ್ದದವರೆಗೆ ಜಟ್ಟಿ ವಿಸ್ತರಣೆಯನ್ನು ಕೈಗೊಳ್ಳಲಾಗುವುದು" ಎಂದು ಘೋಷಿಸಲಾಗಿದೆ.

ಮೇಲೆ ಓದಲಾದ ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು ಇವರ ಪತ್ರದಲ್ಲಿ, ಕರ್ನಾಟಕ ರಾಜ್ಯದಲ್ಲಿ ಒಟ್ಟು 8 ಮೀನುಗಾರಿಕೆ ಬಂದರುಗಳು ಕಾರ್ಯನಿರ್ವಹಿಸುತ್ತಿದ್ದು, ಮಲ್ಪೆ ಮೀನುಗಾರಿಕೆ ಬಂದರು ರಾಜ್ಯದ ದೊಡ್ಡ ಮೀನುಗಾರಿಕೆ ಬಂದರಾಗಿದ್ದು, ಉದ್ಯಾವರ ನದಿಯ ದಡದಲ್ಲಿರುತ್ತದೆ. ಇದು ನೈಸರ್ಗಿಕ ಬಂದರಾಗಿದ್ದು, ಸದರಿ ಬಂದರಿನ ಪ್ರವೇಶ ದ್ವಾರದಲ್ಲಿ ಬ್ರೇಕ್‌ವಾಟರ್ ನಿರ್ಮಿಸಲಾಗಿದ್ದು, ಮೀನುಗಾರಿಕೆ ಬೋಟುಗಳ ಚಲನವಲನಕ್ಕೆ ಅನುಕೂಲ ವಾಗಿರುತ್ತದೆ. ಮಲ್ಪೆ ಮೀನುಗಾರಿಕೆ ಬಂದರಿನಲ್ಲಿ ಸುಮಾರು 500 ಮೀನು ವ್ಯಾಪಾರಸ್ಥರು (ಮೀನುಗಾರ ಮಹಿಳೆಯರು ಸೇರಿ) ಇದನ್ನು ನಿರ್ವಹಿಸುತ್ತಿದ್ದಾರೆ ಹಾಗೂ ಸದರಿ ಬಂದರಿನಲ್ಲಿ ಸುಮಾರು 12000 ಬೋಟು ಕಲಾಸಿಗಳು ವಿವಿಧ ಬೋಟುಗಳಲ್ಲಿ ದುಡಿಯುತ್ತಿದ್ದು, ಸುಮಾರು 12000 ಕೂಲಿಕಾರರು ಮೀನುಗಾರಿಕೆಯ ವಿವಿಧ ಚಟುವಟಿಕೆಗಳಲ್ಲಿ ತೊಡಗಿರುತ್ತಾರೆ. ಪ್ರಸ್ತುತ ಮಲ್ಪೆ ಮೀನುಗಾರಿಕೆ ಬಂದರಿನಲ್ಲಿ ಸುಮಾರು 118 ಪರ್ಸೀನ್ ದೋಣಿಗಳು, 650 ಬಹುದಿನ ಟ್ರಾಲ್‌ಗಳು, 480 ಮಧ್ಯಮ ಗಾತ್ರದ ಟ್ರಾಲ್‌ಗಳು, 250 ಸಣ್ಣ ಟ್ರಾಲ್‌ಗಳು, 950 ಮೋಟರೈಸ್ಡ್ ದೋಣಿಗಳು ಕಾರ್ಯನಿರ್ವಹಿಸುತ್ತಿವೆ. ಮಲ್ಪೆ ಮೀನುಗಾರಿಕೆ ಬಂದರಿನಲ್ಲಿ ಬೋಟುಗಳ ಸಂಖ್ಯೆ ಹೆಚ್ಚಾದ ಕಾರಣ ವಿವಿಧ ಮೀನುಗಾರಿಕೆ ಚಟುವಟಿಕೆಗಳನ್ನು ಸುಗಮವಾಗಿ ನಡೆಸಲು ಕೆಳಗಿನ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಬೇಕಾಗಿರುತ್ತದೆ ಎಂದು ತಿಳಿಸಿರುತ್ತಾರೆ.

1. ಮಲ್ಪೆ ಮೀನುಗಾರಿಕೆ ಬಂದರಿನ ಒಂದನೇ ಮತ್ತು ಎರಡನೇ ಬೇಸಿನ್‌ನ ಉತ್ತರ ದಿಕ್ಕಿನ ಪೂರ್ವ ಮೂಲೆಯಲ್ಲಿ 75 ಮೀಟರ್ ಉದ್ದದ ಜಟ್ಟಿ ನಿರ್ಮಾಣ.
2. ಮಲ್ಪೆ ಮೀನುಗಾರಿಕೆ ಬಂದರಿನ ಎರಡು ಹರಾಜು ಮಳಿಗೆಗಳ ಛಾವಣಿ ಬದಲಾವಣೆ ಮಾಡುವ ಬಗ್ಗೆ.

3. ಎರಡು ಹರಾಜು ಮಳಿಗೆಗಳ ನೆಲಕ್ಕೆ ವಿಟ್ರಿಫೈಡ್ ಟೈಲ್ ಅಳವಡಿಸುವ ಕುರಿತು

4. ಮಲ್ಪೆ ಮೀನುಗಾರಿಕೆ ಬಂದರಿನ ಆಂತರಿಕ ರಸ್ತೆಗಳ ಅಗಲೀಕರಣ.

5. ಹಿಂದಿನ ಆಡಳಿತ ಕಟ್ಟಡವನ್ನು ನವೀಕರಣಗೊಳಿಸಿ ರೇಡಿಯೋ ಕಮ್ಯುನಿಕೇಶನ್ ಕೇಂದ್ರವಾಗಿ ಬದಲಾಯಿಸುವುದು.

ಕಾರ್ಯನಿರ್ವಾಹಕ ಅಭಿಯಂತರರು, ಬಂದರು ಮತ್ತು ಮೀನುಗಾರಿಕೆ ವಿಭಾಗ, ಉಡುಪಿ ಇವರು ಸಲ್ಲಿಸಿರುವ ಅಂದಾಜು ಪಟ್ಟಿಯಲ್ಲಿ ಹಿಂದಿನ ಆಡಳಿತ ಕಟ್ಟಡವನ್ನು ನವೀಕರಣಗೊಳಿಸುವ ಕಾಮಗಾರಿಯನ್ನು ಹೊರತುಪಡಿಸಿ, ಮೇಲಿನ ಕ್ರಮ ಸಂಖ್ಯೆ 01 ರಿಂದ 04 ರವರೆಗಿನ ಅವಶ್ಯ ಕಾಮಗಾರಿಗಳನ್ನು ರೂ.450.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಸರ್ಕಾರದ ಆಡಳಿತಾತ್ಮಕ ಮಂಜೂರಾತಿ ನೀಡಲು ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಕೆಳಕಂಡಂತೆ ಆದೇಶಿಸಿದೆ.

**<u>ಆದೇಶ ಸಂಖ್ಯೆ: ಪಸಂಮೀ 66 ಮೀಇಯೋ 2017, ಬೆಂಗಳೂರು ದಿನಾಂಕ: 10-05-2017</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2017-18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-62 ರಲ್ಲಿನ ಮಲ್ಪೆ ಮತ್ತು ಮಂಗಳೂರು ಮೀನುಗಾರಿಕೆ ಬಂದರುಗಳ ದೋಣಿಗಳ ಸಂಖ್ಯೆಯಲ್ಲಿ ಹೆಚ್ಚಳವಾಗಿರುವುದರಿಂದ ಅವುಗಳ ದಟ್ಟಣೆಯನ್ನು ನಿರ್ವಹಿಸಲು ಅಂದಾಜು 5 ಕೋಟಿ ರೂ.ಗಳ ವೆಚ್ಚದಲ್ಲಿ ದೋಣಿಗಳ ಸುರಕ್ಷಿತ ಇಳಿದಾಣಕ್ಕಾಗಿ ಹಾಗೂ ಮೀನು ವ್ಯಾಪಾರಸ್ಥರ ಮತ್ತು ಕೂಲಿಕಾರರ ಮೀನುಗಾರಿಕೆ ವಿವಿಧ ಚಟುವಟಿಕೆಗಳಿಗಾಗಿ 75 ಮೀ. ಉದ್ದದವರೆಗೆ ಜೆಟ್ಟಿ ನಿರ್ಮಾಣ / ವಿಸ್ತರಣೆ ಮತ್ತು ಇತರೆ ಮೂಲಭೂತ ಸೌಕರ್ಯಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಅಗತ್ಯವಿರುವ ರೂ.500.00 ಲಕ್ಷಗಳನ್ನು ಪ್ರಸಕ್ತ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 4405-00-104-0-02ರಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ/46/ಪಿಎಫ್‌ಒ/2016, ದಿನಾಂಕ: 26-04-2017 ಮತ್ತು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ/318/ವೆಚ್ಚ-4/2017, ದಿನಾಂಕ: 05-05-2017 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

10/5/17

(ರಶ್ಮಿ ಶಿವಶಂಕರ ಪೋಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
10.5.17. (ಮೀನುಗಾರಿಕೆ)

ಇವರಿಗೆ:

1). ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)(ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.

2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
4) ನಿರ್ದೇಶಕರು (ಪಿಎಫ್‌ಡಿ), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5) ಜಂಟಿ ನಿರ್ದೇಶಕರು, ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
6) ಸಂಬಂಧಪಟ್ಟ ಮೀನುಗಾರಿಕೆ ಉಪ ನಿರ್ದೇಶಕರುಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
7) ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ.
8) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
9) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
10) ಶಾಖಾ ರಕ್ಷಾ ಕಡತ / ಸಮನ್ವಯ-ಕಂಪೆಂಡಿಯಮ್ / ಹೆಚ್ಚುವರಿ ಪ್ರತಿಗಳು.

4